ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/04/ಇಸಿಎಸ್(1)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದಿನಾಂಕ:07.07.2023

**<u>ಸುತ್ತೋಲೆ</u>**

ವಿಷಯ: 2022-23ನೇ ಸಾಲಿನ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗೆ ಸಂಬಂಧಿಸಿದಂತೆ ಆಂತರಿಕ ಅಂಕಗಳನ್ನು ಪರಿಶೀಲಿಸಿ BTELinx ವೆಬ್ ಪೋರ್ಟಲ್ ಮೂಲಕ ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿ ಜ್ಞಾಪನ ಸಂಖ್ಯೆ:ಬಿಟಿಇ/04/ಇಸಿಎಸ್(1)/2023 ದಿನಾಂಕ: 19.06.2023

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಜ್ಞಾಪನದನ್ವಯ 2022-23ನೇ ಸಾಲಿನ ಜುಲೈ 2023ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಆಂತರಿಕ ಅಂಕಗಳನ್ನು ಹಾಗೂ ಅದಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಬಾಹ್ಯ ಪಾಲಿಟೆಕ್ನಿಕ್ ಸಂಸ್ಥೆಯಿಂದ ನಿಯೋಜಿಸಲ್ಪಟ್ಟ ಮುಖ್ಯವೀಕ್ಷಕರು/ಮುಖ್ಯ ಅಧೀಕ್ಷಕರು/ಉಪ ಮುಖ್ಯ ಅಧೀಕ್ಷಕರುಗಳಲ್ಲಿ ಜೇಷ್ಠತೆಯಲ್ಲಿ ಹಿರಿಯರಾದ ಅಧಿಕಾರಿಗಳು **<u>ದಿನಾಂಕ:14.07.2023 ರೊಳಗೆ</u>** ಚೆಕ್ ಲಿಸ್ಟ್‌ನಲ್ಲಿ ತಿಳಿಸಿರುವಂತೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಿ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ BTELinx ವೆಬ್ ಪೋರ್ಟಲ್ ಮೂಲಕ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ.

ಅಂತಿಮ ವರ್ಷದ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಔದ್ಯೋಗಿಕ ಹಿತದೃಷ್ಟಿಯಿಂದ ಫಲಿತಾಂಶವನ್ನು ತುರ್ತಾಗಿ ನೀಡಬೇಕಾಗಿರುತ್ತದೆ. ಆಂತರಿಕ ಅಂಕಗಳನ್ನು ನಿಗಧಿತ ಸಮಯದಲ್ಲಿ ಅಪ್‌ಲೋಡ್ ಮಾಡದೆ ಫಲಿತಾಂಶ ವಿಳಂಬವಾದರೆ ಹಾಗೂ ಯಾವುದೇ ಲೋಪದೋಷಗಳಿಂದ/ಆಂತರಿಕ ಅಂಕಗಳ ವ್ಯತ್ಯಾಸದಿಂದ ವಿದ್ಯಾರ್ಥಿಗಳಿಗೆ ಫಲಿತಾಂಶದಲ್ಲಿ ತೊಂದರೆಗಳಾದಲ್ಲಿ ಸಂಬಂಧಿಸಿದ ಪ್ರಿನ್ಸಿಪಾಲರನ್ನೇ ನೇರ ಹೊಣೆಗಾರರನ್ನಾಗಿಸಿ ಚಾಲ್ತಿಯಲ್ಲಿರುವ ಸರ್ಕಾರಿ ಆದೇಶದ ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

ಕಾರ್ಯದರ್ಶಿ

ಇವರಿಗೆ,

1..ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪ್ರಾಂಶುಪಾಲರುಗಳಿಗೆ.-ಅಗತ್ಯ ಕ್ರಮಕ್ಕಾಗಿ
2.ಆಂತರಿಕ ಅಂಕಗಳ ಪರಿವೀಕ್ಷಕರುಗಳಿಗೆ- ಪರೀಕ್ಷಾ ಕೇಂದ್ರಗಳ ಪ್ರಿನ್ಸಿಪಾಲರುಗಳ ಮುಖಾಂತರ

ಪ್ರತಿ:

1. ಕಂಪ್ಯೂಟರ್ ವಿಭಾಗ - ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
2. ಇ-ಗವರ್ನೆನ್ಸ್ ವಿಭಾಗ -ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3. ಕಾರ್ಯದರ್ಶಿಯವರ ಆಪ್ತಶಾಖೆ
4. ಪರೀಕ್ಷಾ ವಿಭಾಗದ ಅಧಿಕಾರಿಗಳು/ ಸಿಬ್ಬಂದಿಯವರಿಗೆ
5. ಇಎಪಿ ವಿಭಾಗ